**ಜೆಎಸ್‌ಎಸ್ ಮಹಾವಿದ್ಯಾಪೀಠ**
**ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು**

# ಶಿವಾನುಭವ ದಾಸೋಹ-284

**25 ಡಿಸೆಂಬರ್ 2021 * ಶನಿವಾರ * ಸಂಜೆ 6.00**

ದಿವ್ಯ ಆಶೀರ್ವಾದ
**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**
ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಸುತ್ತೂರು ಶ್ರೀಕ್ಷೇತ್ರ

ಅಧ್ಯಕ್ಷತೆ
**ಶ್ರೀ ಪಿ. ಶಿವರಾಜು**
ಹೆಚ್ಚುವರಿ ಆಯುಕ್ತರು, ಪ್ರಾದೇಶಿಕ ಆಯುಕ್ತರ ಕಛೇರಿ, ಮೈಸೂರು

ಉಪನ್ಯಾಸ
**ಶ್ರೀ ಚಿನ್ನಸ್ವಾಮಿ ವಡ್ಡಗೆರೆ**
ಕೃಷಿಕರು ಮತ್ತು ಹವ್ಯಾಸಿ ಪತ್ರಕರ್ತರು, ಮೈಸೂರು

ವಿಷಯ: ಪ್ರಸ್ತುತ ಸಮಾಜಕ್ಕೆ ವಚನಸಾಹಿತ್ಯದ ಅಗತ್ಯತೆ

ಭಜನೆ
**ಶ್ರೀ ಶಿವರಾತ್ರೀಶ್ವರ ಭಜನಾ ಮಂಡಳಿ**
ಜೆಎಸ್‌ಎಸ್ ಬಡಾವಣೆ, 2ನೇ ಹಂತ, ಮೈಸೂರು

**ತಮಗೆ ಆದರದ ಸ್ವಾಗತ**

**ಸ್ಥಳ : 643, ಜೆಎಸ್‌ಎಸ್ ಬಡಾವಣೆ, 2ನೇ ಹಂತ, ಲಲಿತಾದ್ರಿಪುರ, ಮೈಸೂರು 570 028**

ಕೋವಿಡ್ 19ರ ಮಾರ್ಗಸೂಚಿಗಳನ್ನು ಪಾಲಿಸಲು ಕೋರಿದೆ

ಪ್ರಾಯೋಜಕರು
ಶ್ರೀಮತಿ ನೀಲಮ್ಮ ಮತ್ತು ಶ್ರೀ ಪ್ರಭಾಕರ ಸಿದ್ದಪ್ಪ ಸಲಬಣ್ಣವರ್
ಚಿತ್ರಕಲಾ ಶಿಕ್ಷಕರು, ಜೆಎಸ್‌ಎಸ್ ಪ್ರೌಢಶಾಲೆ, ದೇವಲಾಪುರ

ಶ್ರೀಮತ್ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕವೇ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿ ಮುಂತಾದ ಹಲವಾರು ಸಂಸ್ಥೆಗಳ ಮೂಲಕ ಧರ್ಮದಾಸೋಹವನ್ನು ನಡೆಸುತ್ತಿದ್ದರು. 1986ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಗಳನ್ನು ಸ್ಥಾಪಿಸಿ ಧಾರ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ದಿನಾಂಕ 12.5.1996ರಂದು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಶ್ರೀ ಪಿ. ಶಿವರಾಜುರವರು** ಮಳವಳ್ಳಿ ತಾಲ್ಲೂಕಿನ ಪೂರಿಗಾಲಿ ಗ್ರಾಮದವರು. 2010ರಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ಕೆಎಎಸ್ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿ ಹಾವೇರಿಯಲ್ಲಿ ಉಪವಿಭಾಗಾಧಿಕಾರಿಗಳಾಗಿ ವೃತ್ತಿ ಪ್ರಾರಂಭಿಸಿದರು. ನಂತರ ಸಕಲೇಶಪುರ, ಕೊಡಗು ಮತ್ತು ಬೆಂಗಳೂರಿನಲ್ಲಿ ವಿವಿಧ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸಿ ಪ್ರಸ್ತುತ ಮೈಸೂರಿನ ಪ್ರಾದೇಶಿಕ ಆಯುಕ್ತರ ಕಛೇರಿಯಲ್ಲಿ ಹೆಚ್ಚುವರಿ ಆಯುಕ್ತರಾಗಿ ಕೆಲಸ ನಿರ್ವಹಿಸುತ್ತಿದ್ದಾರೆ.

**ಶ್ರೀ ಚಿನ್ನಸ್ವಾಮಿ ವಡ್ಡಗೆರೆಯವರು** ಪ್ರಗತಿಪರ ಕೃಷಿಕರು ಮತ್ತು ಲೇಖಕರು. ಚಾಮರಾಜನಗರ ಜಿಲ್ಲೆ ಗುಂಡ್ಲುಪೇಟೆ ತಾಲ್ಲೂಕು ವಡ್ಡಗೆರೆ ಗ್ರಾಮದವರು. ಮೈಸೂರು ವಿಶ್ವವಿದ್ಯಾನಿಲಯದಿಂದ ಕನ್ನಡ ವಿಷಯದಲ್ಲಿ ಸ್ನಾತಕೋತ್ತರ ಪದವಿ ಪಡೆದ ಇವರು ಕಾಡುಕೃಷಿ, ಒಣಭೂಮಿ ಬೇಸಾಯ, ಹೈನುಗಾರಿಕೆ ಮತ್ತು ರೇಷ್ಮೆ ಕೃಷಿಯಲ್ಲಿ ಸಾಕಷ್ಟು ಪರಿಣತಿ ಹೊಂದಿದ್ದಾರೆ. ಪತ್ರಕರ್ತರಾಗಿಯೂ ಸಾಕಷ್ಟು ಕೃಷಿ ಮಾಡಿರುವ ಇವರು 'ವಿಜಯ ಕರ್ನಾಟಕ' ಮತ್ತು 'ಆಂದೋಲನ' ದಿನಪತ್ರಿಕೆಗಳಲ್ಲಿ ಹಿರಿಯ ಉಪಸಂಪಾದಕರಾಗಿ ಕೆಲಸ ಮಾಡಿದ್ದಾರೆ. 'ಆಂದೋಲನ' ದಿನಪತ್ರಿಕೆಯಲ್ಲಿ 'ಬಂಗಾರದ ಮನುಷ್ಯ' ಎಂಬ ಅಂಕಣದ ಮೂಲಕ ಕೃಷಿ ಸಾಧಕರ ಯಶೋಗಾಥೆಗಳನ್ನು ಪರಿಚಯಿಸುತ್ತಿದ್ದಾರೆ.

**ಶ್ರೀ ಪ್ರಭಾಕರ ಸಿದ್ದಪ್ಪ ಸಲಬಣ್ಣವರ್‌ರವರು** ಬಾಗಲಕೋಟೆ ಜಿಲ್ಲೆಯ ತೇರದಾಳ ಗ್ರಾಮದವರು. ಇವರು ಪ್ರಸ್ತುತ ದೇವಲಾಪುರ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ ಚಿತ್ರಕಲಾ ಶಿಕ್ಷಕರಾಗಿದ್ದಾರೆ. ಇವರ ಧರ್ಮಪತ್ನಿ ಶ್ರೀಮತಿ ನೀಲಮ್ಮನವರು ಗೃಹಿಣಿಯಾಗಿದ್ದಾರೆ. ಇವರಿಗೆ ಪುತ್ರಿ ಕು. ವೀಣಾ ಪ್ರಭಾಕರ್ ಸಲಬಣ್ಣವರ್ ಮತ್ತು ಪುತ್ರ ಕು. ರಾಜಗುರು ಪ್ರಭಾಕರ್ ಸಲಬಣ್ಣವರ್ ಎಂಬ ಮಕ್ಕಳಿದ್ದಾರೆ.